ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಅ.ಅ/ಯ.ವ/ತಾಂ.ಮ/ /2013-14

ಅಧೀಕ್ಷಕ ಅಭಿಯಂತರವರ ಕಛೇರಿ
ಯಲಹಂಕ, ಬೃ.ಬೆಂ.ಮ.ಪಾ.
ಬ್ಯಾಡರಾಯನಪುರ ವಿಜಯ ಬ್ಯಾಂಕ್ ಕಾಲೋನಿ
ಬೆಂಗಳೂರು-92
ದಿನಾಂಕ:

ಮಾರ್ಪಾಡಿತ ತಾಂತ್ರಿಕ ಮಂಜೂರಾತಿ

ವಿಷಯ:- Improvements to Roads and Drains at Muneshwara Block Surroundings in Ward No 10.

ಉಲ್ಲೇಖ:1. ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ , ಕಾಮಗಾರಿ ಸಂಕೇತ:

2. **ಆಡಳಿತಾತ್ಮಕ ಮಂಜೂರಾತಿ** ಸಂಖ್ಯೆ:ಬೃ.ಬೆಂ.ಮ.ಪಾ/ಅ.ಆ/ಯ.ವ/ಆ.ಅ/647/2013-14 ದಿ:23.12.2013.
3. ಈ ಹಿಂದೆ ನೀಡಲಾಗಿರುವ ತಾಂತ್ರಿಕ ಮಂಜೂರಾತಿ ಸಂಖ್ಯೆ: ಬೃ.ಬೆಂ.ಮ.ಪಾ/ ಕಾ.ಅ/ಯ.ವ/ತಾಂ.ಮ/168/2012-13 ದಿ:23.12.2013 ರದ್ದುಪಡಿಸಿದೆ.
4. ಸದರಿ ಮಾರ್ಪಾಡಿತ ಅಂದಾಜು ಪಟ್ಟಿಗೆ ಕಡತದ ಕಂಡಿಕೆ( )ರಲ್ಲಿ ಮುಖ್ಯ ಅಭಿಯಂತರರು(ಯಲಹಂಕ ವಲಯ)ರವರು ಅನುಮೋದನೆ ನೀಡಿರುತ್ತಾರೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯಾರಣ್ಯಪುರ ಉಪ ವಿಭಾಗ) ರವರು **2013-14ನೇ** ಸಾಲಿನ **ಕೆ.ಪಿ.ಡಬ್ಲ್ಯೂ.ಡಿ. ಎಸ್.ಆರ್** ದರಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ ಪಿ-2654, ಅನುದಾನದಡಿಯಲ್ಲಿ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ರೂ. 15.00 ಲಕ್ಷಗಳಿಗೆ ತಾಂತ್ರಿಕ ಮಂಜೂರಾತಿಗಾಗಿ ನೀಡಲಾಗಿರುತ್ತದೆ. ಆದರೆ ಕಂಡಿಕೆ (4)ರಂತೆ ಸದರಿ ಕಾಮಗಾರಿಯನ್ನು ಕೆ.ಆರ್.ಐ.ಡಿ.ಎಲ್ ಮುಖಾಂತರ ನಿರ್ವಹಿಸಲು ಅನುಮೋದನೆಯಾಗಿದ್ದು, ಸದರಿ ಅಂದಾಜು ಪಟ್ಟಿಯಲ್ಲಿ ಕೆ.ಆರ್.ಐ.ಡಿ.ಎಲ್ ನಿಗದಿ ಪಡಿಸಿರುವ ಮೊತ್ತವನ್ನು ಸೇರಿಸಿ ಅಂದಾಜು ಪಟ್ಟಿಯನ್ನು ತಯಾರಿಸಿ ತಾಂತ್ರಿಕ ಮಂಜೂರಾತಿ ಕೋರಿ ಸಲ್ಲಿಸಿರುತ್ತಾರೆ.

ಉಲ್ಲೇಖ (1) ರಂತೆ ಕಾಮಗಾರಿ ಸಂಕೇತ ಹಾಗೂ ಉಲ್ಲೇಖ (2) ರಂತೆ ಜಂಟಿ ಆಯುಕ್ತರು ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:02-09-2014ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ_____ಕ್ರ.ಸಂ_____ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register)ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಅಧೀಕ್ಷಕ ಅಭಿಯಂತರರು
ಯಲಹಂಕ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಬ್ಯಾ.ವಿ.ಬ್ಯಾಂ.ಕ್ಯಾ, ಬೆಂಗಳೂರು-92.

ಪ್ರತಿಯನ್ನು:

1. ಮಾನ್ಯ ಅಪರ ಆಯುಕ್ತರು, ಬಿ.ಬಿ.ಎಂ.ಪಿ ಯಲಹಂಕ ವಲಯರವರ ಮಾಹಿತಿಗಾಗಿ.
2. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.